ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಸದಸ್ಯರ ಹೆಸರು	:	ಶ್ರೀ ಮಾನೆ ಶ್ರೀನಿವಾಸ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**1246**
ಉತ್ತರಿಸಬೇಕಾದ ದಿನಾಂಕ	:	22.09.2021
ಉತ್ತರಿಸಬೇಕಾದ ಸಚಿವರು	:	ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	2017-18 ರಿಂದ 2020-21 ನೇ ಸಾಲಿನ ಅವಧಿಯಲ್ಲಿ ರಾಜ್ಯಾದ್ಯಂತ ಹಾವೇರಿ, ಗದಗ ಹಾಗೂ ಧಾರವಾಡ ಜಿಲ್ಲೆಯಲ್ಲಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; ಮಂಜೂರಾದ ಎಲ್ಲಾ ಮನೆಗಳಿಗೆ ಸರ್ಕಾರದಿಂದ ನಿಗಧಿಪಡಿಸಿದ ಸಹಾಯಧನವನ್ನು ಪೂರ್ಣ ಪ್ರಮಾಣದಲ್ಲಿ ಬಿಡುಗಡೆಗೊಳಿಸಲಾಗಿದೆಯೇ ;	2017-18 ರಿಂದ 2020-21 ನೇ ಸಾಲಿನ ಅವಧಿಯಲ್ಲಿ ಹಾವೇರಿ, ಗದಗ ಮತ್ತು ಧಾರವಾಡ ಜಿಲ್ಲೆಯಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ವಿವಿಧ ವಸತಿ ಯೋಜನೆಗಳಡಿ 55862 ಮನೆಗಳನ್ನು ಮಂಜೂರು ಮಾಡಿ ಕಾಮಗಾರಿ ಆದೇಶವನ್ನು ನೀಡಲಾಗಿದೆ. ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ದಡಿ 2017-18 ರಿಂದ 2020-21 ನೇ ಸಾಲಿನ ಅವಧಿಯಲ್ಲಿ ಹಾವೇರಿ, ಗದಗ ಮತ್ತು ಧಾರವಾಡ ಜಿಲ್ಲೆಯಲ್ಲಿ 31923 ಮನೆಗಳಿಗೆ ಅನುಮೋದನೆ ದೊರೆತಿದೆ.
(ಆ)	ಸಹಾಯಧನ ಬಿಡುಗಡೆಯಾಗದಿದ್ದಲ್ಲಿ, ಕಾರಣವೇನು ; ಯಾವಾಗ ಸಹಾಯಧನವನ್ನು ಬಿಡುಗಡೆಗೊಳಿಸಲಾಗುವುದು ?	2017-18 ರಿಂದ 2020-21 ನೇ ಶ್ರೇಣಿಯಲ್ಲಿ ಹಾವೇರಿ, ಗದಗ ಹಾಗೂ ಧಾರವಾಡ ಜಿಲ್ಲೆಯಲ್ಲಿ ಕಾಮಗಾರಿ ಆದೇಶ ನೀಡಲಾದ ಮನೆಗಳಿಗೆ ಜಿ.ಪಿ.ಎಸ್ ಆಧಾರಿಕ ಭೌತಿಕ ಪ್ರಗತಿಗನುಗುಣವಾಗಿ ಆಧಾರ್ ಜೋಡಣೆಗೊಂಡ ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮುಖಾಂತರ ಆಗಸ್ಟ 2021 ರ ಅಂತ್ಯಕ್ಕೆ ರೂ.401.15 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಜಿಲ್ಲಾವಾರು ವಿವರ ಈ ಕೆಳಕಂಡಂತಿದೆ. (ರೂ.ಕೋಟಿಗಳಲ್ಲಿ) ಜಿಲ್ಲೆಗಳು — ಅನುದಾನ ಹಾವೇರಿ ಜಿಲ್ಲೆ — 168.85 ಗದಗ ಜಿಲ್ಲೆ — 120.68 ಧಾರವಾಡ ಜಿಲ್ಲೆ — 111.62 ಒಟ್ಟು — 401.15 ವಿವಿಧ ವಸತಿ ಯೋಜನೆಗಳಡಿ ಮಂಜೂರಾದ ಮನೆಗಳಿಗೆ ಇಂದಿರಾ ಮನೆ ಆ್ಯಪ್ ನ ಮುಖಾಂತರ ಜಿ.ಪಿ.ಎಸ್ ಮಾಡಲಾದ ಮನೆಗಳ ಭೌತಿಕ ಪ್ರಗತಿಗನುಗುಣವಾಗಿ

		ಅನುದಾನ ಬಿಡುಗಡೆ ಮಾಡಲಾಗುತ್ತಿತ್ತು, ಆದರೆ, ಪ್ರಗತಿಯಲ್ಲಿರುವ ಮನೆಗಳಲ್ಲಿ ಕೆಲವು ಅನರ್ಹ ಫಲಾನುಭವಿಗಳ ಆಯ್ಕೆ ಕಂಡು ಬಂದಿರುವುದರಿಂದ ಅನುದಾನ ದುರ್ಬಳಕೆಯನ್ನು ತಡೆ ಹಿಡಿಯುವ ಉದ್ದೇಶದಿಂದ ಸರ್ಕಾರದ ಆದೇಶ ಸಂಖ್ಯೆ:ವಇ 154 ಹೆಚ್‌ಎಎಂ 2019, ದಿನಾಂಕ:16.11.2019 ರ ರೀತ್ಯಾ ಪ್ರಗತಿಯಲ್ಲಿರುವ ಮನೆಗಳನ್ನು ಇಂದಿರಾ ಮನೆ ಮೊಬೈಲ್ ಆಪ್ ಮೂಲಕ ಜಿ.ಪಿ.ಎಸ್ ಗೆ ಅಳವಡಿಸಿ, ಅರ್ಹಗೊಂಡ ನಂತರ ಸದರಿ ಮನೆಗಳ ಪ್ರಗತಿಯನ್ನು ಮತ್ತೊಮ್ಮೆ Geo ಆಧಾರಿತ ವಿಜಿಲ್ ಆಪ್ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯವರು ಹಾಗೂ ನಗರ ಪ್ರದೇಶದಲ್ಲಿ ಜಿಲ್ಲಾಧಿಕಾರಿಯವರು ಪರಿಶೀಲಿಸಿ, ದೃಢೀಕರಿಸಿದ ನಂತರ ಸದರಿ ಫಲಾನುಭವಿಗಳ ಆಧಾರ್ ಜೋಡಣೆಯಾದ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮುಖಾಂತರ ಅನುದಾನ ಬಿಡುಗಡೆ ಮಾಡಲಾಗುತ್ತಿತ್ತು. ಮುಂದುವರೆದಂತೆ ವಿವಿಧ ವಸತಿ ಯೋಜನೆಗಳಡಿ ಪ್ರಗತಿಯಲ್ಲಿರುವ ಮನೆಗಳ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡುವಾಗ ಇಂದಿರಾ ಆಪ್ ಮತ್ತು ವಿಜಿಲ್ ಆಪ್ ಎಂಬ ಎರಡು ಪರಿಶೀಲನಾ ವಿಧಾನಗಳ ಮೂಲಕ ಅನುದಾನ ಬಿಡುಗಡೆ ಆಗುತ್ತಿದ್ದು, ಇದರಿಂದ ಆಗುವ ವಿಳಂಬವನ್ನು ತಪ್ಪಿಸಲು ಮೇಲ್ಕಂಡ ಇಂದಿರಾ ಆಪ್ ಮತ್ತು ವಿಜಿಲ್ ಆಪ್ ಅನ್ನು ಒಗ್ಗೂಡಿಸಿ, ಇಂದಿರಾ ವಿಜಿಲ್ ಆಪ್ ಎಂಬ ನೂತನ ತಂತ್ರಾಂಶವನ್ನು ಅಳವಡಿಸಲಾಗಿದ್ದು, ಫಲಾನುಭವಿಗಳಿಗೆ ಶೀಘ್ರವಾಗಿ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಸಂಖ್ಯೆ :ವಇ 346 ಹೆಚ್‌ಎಎಂ 2021

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು